ದೂರವಾಣಿ / ಫ್ಯಾಕ್ಸ್ : 080-2793 4470
080-2793 5412

URL : www.hoskote.tpa.gov.in
e-mail : hosakote.pa@gmail.com

# ಹೊಸಕೋಟೆ ಯೋಜನಾ ಪ್ರಾಧಿಕಾರ

ಮಿಷನ್ ಹಾಸ್ಪಿಟಲ್ ರಸ್ತೆ, 1ನೇ ಅಡ್ಡರಸ್ತೆ, ಶ್ರೀ ವೆಂಕಟಾದ್ರಿ ಬಡಾವಣೆ, ಹೊಸಕೋಟೆ - 562 114, ಬೆಂಗಳೂರು (ಗ್ರಾ) ಜಿಲ್ಲೆ.

ಸಂಖ್ಯೆ: ಹೊಯೋಪ್ರಾ/ಸಿ.ಸಿ./24/2021–22 ದಿನಾಂಕ: 09.09.2021

## ಪ್ರಾರಂಭಿಕ ಪ್ರಮಾಣ ಪತ್ರ/ Commencement Certificate

**ವಿಷಯ:** ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಬೊಮ್ಮೇನಹಳ್ಳಿ ಗ್ರಾಮದ ಸ.ನಂ. 130/2ಬಿ ರಲ್ಲಿನ 01 ಎಕರೆ 18 3/4 ಗುಂಟೆ ವಿಸ್ತೀರ್ಣದ ಜಮೀನಿಗೆ ಈ ಕಛೇರಿಯಿಂದ ವಸತಿ ಉದ್ದೇಶದ ಏಕ ನಿವೇಶನ ನಕ್ಷೆಗೆ ಅನುಮೋದನೆ ನೀಡಲಾಗಿದ್ದು, ಮಂಡೂರು ಗ್ರಾಮಪಂಚಾಯಿತಿ ಖಾತಾ ಸಂಖ್ಯೆ: 278/259/153/1 ರ ಸ್ವತ್ತಿನ ಸಂಖ್ಯೆ: 150200401601600268 ರಲ್ಲಿನ ವಸತಿ ಕಟ್ಟಡಗಳ ನಕ್ಷೆಗೆ ಅನುಮೋದನೆ ನೀಡುವ ಬಗ್ಗೆ.

**ಉಲ್ಲೇಖ:**

1. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಮಂಡೂರು ಗ್ರಾಮಪಂಚಾಯಿತಿ, ಬೆಂಗಳೂರು ಪೂರ್ವ ತಾಲ್ಲೂಕು ರವರ ಪತ್ರ ಸಂ: ಮ.ಗ್ರಾ.ಪಂ/88/2021–22, ದಿನಾಂಕ: 14.07.2021 (ಈ ಕಛೇರಿಯಲ್ಲಿ ದಿನಾಂಕ: 28.07.2021 ರಂದು ಸ್ವೀಕರಿಸಿದೆ)
2. ಈ ಕಛೇರಿಯ ಮಂಜೂರಾತಿ ಆದೇಶ ಸಂಖ್ಯೆ: ಹೊಯೋಪ್ರಾ/ಎಲ್.ಎ.ಓ/ 33/2020–21, ದಿನಾಂಕ: 03.04.2021 ರಂದು ವಸತಿ ಉದ್ದೇಶದ ಏಕ ನಿವೇಶನ ನಕ್ಷೆಗೆ ಅನುಮೋದನೆ ನೀಡಿರುವುದು.
3. ಅರ್ಜಿದಾರರು ಪ್ರಾಧಿಕಾರಕ್ಕೆ ಶುಲ್ಕ ಪಾವತಿಸಿದ ಕುರಿತು ಮನವಿ ದಿನಾಂಕ: 19.08.2021 ರೊಂದಿಗೆ ICICI Bank, M.G. Road, Bangalore (503705) ರಲ್ಲಿನ ಡಿ.ಡಿ.ನಂ. 503705 ದಿನಾಂಕ: 19.08.2021, ರೂ. 11,95,800/–.

Housiey.com

**ಪ್ರಸ್ತಾವನೆ:–**

ಉಲ್ಲೇಖ (1) ರಲ್ಲಿ ಅನುಮೋದಿತ ವಸತಿ ಉದ್ದೇಶದ ಏಕ ನಿವೇಶನದಲ್ಲಿನ ನೆಲ + 08 ಅಂತಸ್ತಿನ (G+8 Floors) ಒಟ್ಟು 98 ವಸತಿ ಘಟಕಗಳಿಗೆ ಮಂಡೂರು ಗ್ರಾಮಪಂಚಾಯಿತಿಯ ಖಾತಾ ಸಂಖ್ಯೆ: 278/259/153/1 ರ ಸ್ವತ್ತಿನ ಸಂಖ್ಯೆ: 150200401601600268 ರಲ್ಲಿನ ಕಟ್ಟಡ ನಕ್ಷೆಗಳಿಗೆ ಅನುಮೋದನೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಲಾಗಿದ್ದು, ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದೆ.

ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಬೊಮ್ಮೇನಹಳ್ಳಿ ಗ್ರಾಮದ ಸ.ನಂ. 130/2ಬಿ ರಲ್ಲಿನ 01 ಎಕರೆ 18 3/4 ಗುಂಟೆ ವಿಸ್ತೀರ್ಣದ ಜಮೀನಿಗೆ ವಸತಿ ಉದ್ದೇಶದ ಏಕ ನಿವೇಶನ ನಕ್ಷೆಗೆ ಉಲ್ಲೇಖ (2) ರಂತೆ ಈ ಪ್ರಾಧಿಕಾರದಿಂದ ಅನುಮೋದನೆ ನೀಡಲಾಗಿದೆ ಹಾಗೂ ಉಲ್ಲೇಖ (3) ರಂತೆ ವಸತಿ ಕಟ್ಟಡ ನಕ್ಷೆಗೆ ಅನುಮೋದನೆಗೆ ಸಂಬಂಧಿಸಿದಂತೆ ಈ ಪ್ರಾಧಿಕಾರಕ್ಕೆ ಶುಲ್ಕವನ್ನು ಪಾವತಿಸಿರುತ್ತಾರೆ.

ಸದರಿ ಜಮೀನಿಗೆ ಬೂದಿಗೆರೆ ರಸ್ತೆಯಿಂದ ನಿಂಬೇಕಾಯಿಪುರಕ್ಕೆ ಹೋಗುವ ಹಾಲಿ 12.20 ಮೀ. ಅಗಲದ ರಸ್ತೆಯಿಂದ ಸಂಪರ್ಕವಿದ್ದು, ಸಲ್ಲಿಸಲಾದ ಕಟ್ಟಡ ನಕ್ಷೆಗಳು ಅನುಮೋದಿತ ವಲಯ ನಿಯಮಾವಳಿಗಳಿಗೆ ಅನುಗುಣವಾಗಿರುತ್ತದೆ.

ಆದ್ದರಿಂದ, ಮೇಲೆ ವಿವರಿಸಿರುವ ಅಂಶಗಳ ಮೇರೆಗೆ ವಸತಿ ಕಟ್ಟಡ ನಕ್ಷೆಗಳಿಗೆ ತಾಂತ್ರಿಕ ಅನುಮೋದನೆ ನೀಡುವ ಸಂಬಂಧ ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

**ಆದೇಶ ಸಂಖ್ಯೆ: ಹೊಯೋಪ್ರಾ/ಸಿ.ಸಿ./24/2021-22, ದಿನಾಂಕ : 09.09.2021**

ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಬೊಮ್ಮೇನಹಳ್ಳಿ ಗ್ರಾಮದ ಸ.ನಂ. 130/2ಬಿ ರಲ್ಲಿನ 01 ಎಕರೆ 18 3/4 ಗುಂಟೆ ವಿಸ್ತೀರ್ಣದ ಜಮೀನಿಗೆ ಅನುಮೋದನೆಯಾದ ವಸತಿ ಉದ್ದೇಶದ ಏಕ ನಿವೇಶನದಂತೆ ಹಾಗೂ ಮಂಡೂರು ಗ್ರಾಮಪಂಚಾಯಿತಿ ಖಾತಾ ಸಂಖ್ಯೆ: 278/259/153/1 ರ ಸ್ವತ್ತಿನ ಸಂಖ್ಯೆ: 150200401601600268 ರಲ್ಲಿ ನೆಲ + 08 ಅಂತಸ್ತಿನ (G+8 Floors) ಒಟ್ಟು 98 ವಸತಿ ಘಟಕಗಳಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 15(1) ರನ್ವಯ ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟು ಕಾರ್ಯರೂಪಕ್ಕೆ ತರಲು ತಾಂತ್ರಿಕ ಅನುಮೋದನೆ ನೀಡಲಾಗಿದೆ.

**ಷರತ್ತುಗಳು:**

1. ಈಗ ನೀಡಿರುವ ಕಟ್ಟಡ ನಕ್ಷೆ ಮಂಜೂರಾತಿಯ ಅವಧಿಯು ಮಂಜೂರಾತಿ ನೀಡಿದ ದಿನದಿಂದ ಎರಡು ವರ್ಷಗಳವರೆಗೆ ಮಾತ್ರ ಅಂದರೆ ದಿನಾಂಕ: 09.09.2021 ರಿಂದ ದಿನಾಂಕ: 08.09.2023 ರವರೆಗೆ ಜಾರಿಯಲ್ಲಿರುತ್ತದೆ. ಈ ಅವಧಿಯಲ್ಲಿ ಕಟ್ಟಡ ಅಭಿವೃದ್ಧಿ ಕಾರ್ಯ ಪೂರ್ಣಗೊಳ್ಳದಿದ್ದಲ್ಲಿ, ಅನುಮತಿಯನ್ನು ನವೀಕರಿಸಿಕೊಳ್ಳತಕ್ಕದ್ದು.
2. **ಈ ಅನುಮೋದಿತ ವಸತಿ ಕಟ್ಟಡ ನಕ್ಷೆಯನ್ನು ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ, ಬೆಂಗಳೂರು (ರೇರಾ) ರವರಲ್ಲಿ ನೋಂದಣಿ ಮಾಡಿಸುವುದು ಕಡ್ಡಾಯವಾಗಿರುತ್ತದೆ ಹಾಗೂ ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ, (ರೇರಾ), ಕರ್ನಾಟಕ ರವರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.**
3. ಅನುಮೋದಿತ ವಸತಿ ಅಭಿವೃದ್ಧಿ ಯೋಜನೆಯಲ್ಲಿ ಪ್ರಸ್ತಾವಿಸಲಾದ ಕಟ್ಟಡ ನಕ್ಷೆಗೆ ಅನುಗುಣವಾಗಿ ಹಾಗೂ ಈ ಪ್ರಾಧಿಕಾರದಿಂದ ನೀಡಲಾದ ಅನುಮೋದನೆಯಂತೆ ಕಟ್ಟಡವನ್ನು ನಿರ್ಮಿಸತಕ್ಕದ್ದು. ಕಟ್ಟಡ ಕಾಮಗಾರಿ ಪೂರ್ಣಗೊಂಡ ನಂತರ ಈ ಕಛೇರಿಗೆ ಮಾಹಿತಿ ನೀಡತಕ್ಕದ್ದು.
4. ಸದರಿ ಜಮೀನಿನಲ್ಲಿ ಪ್ರಸ್ತಾಪಿಸಿರುವ ಕಟ್ಟಡಗಳ ನಿರ್ಮಾಣ ಸಂಬಂಧ ಸಲ್ಲಿಸಿರುವ ಮೆ॥ ವಿಷನ್ ಸ್ಟ್ರಕ್ಚರಲ್ ಡಿಸೈನ್ ಏಡ್, ಬೆಂಗಳೂರು ರವರ ಸ್ಥಿರತೆ ಪ್ರಮಾಣ ಪತ್ರ (Structural Stability Certificate) ದಲ್ಲಿ ತಿಳಿಸಿರುವಂತೆ ಅವರ ಮೇಲ್ವಿಚಾರಣೆಯಲ್ಲಿ ಹಾಗೂ ನಿಯಮಗಳಂತೆ ಕಟ್ಟಡಗಳನ್ನು ನಿರ್ಮಿಸತಕ್ಕದ್ದು ಹಾಗೂ ಸದರಿ ಕಟ್ಟಡದ ಗುಣಮಟ್ಟಕ್ಕೆ ಅರ್ಜಿದಾರರು/ಅಭಿವೃದ್ಧಿದಾರರು ಹಾಗೂ Structural Stability Certificate ನೀಡಿದ ಇಂಜಿನಿಯರ್ ರವರು ಹೊಣೆಗಾರರಾಗಿರುತ್ತಾರೆ.
5. ನಿವೇಶನದಲ್ಲಿ ಕಟ್ಟಡ ಕಾಮಗಾರಿಯನ್ನು ಪ್ರಾರಂಭಿಸುವ ಮುನ್ನ / ಕೈಗೊಳ್ಳುವ ಮೊದಲು ಸಂಬಂಧಪಟ್ಟ ಸ್ಥಳೀಯ ಸಂಸ್ಥೆಯಾದ ಮಂಡೂರು ಗ್ರಾಮಪಂಚಾಯಿತಿ ವತಿಯಿಂದ ಪರವಾನಗಿ ಪಡೆಯತಕ್ಕದ್ದು. ಸದರಿ ಕಟ್ಟಡವು ಪೂರ್ಣಗೊಂಡ ನಂತರ ನಿಯಮಾನುಸಾರ ಸ್ವಾಧೀನಾನುಭವ ಪತ್ರವನ್ನು ಪಡೆಯತಕ್ಕದ್ದು.
6. **ಸದರಿ ಜಮೀನಿನಲ್ಲಿ ವಸತಿ ಕಟ್ಟಡ ಕಾಮಗಾರಿ ಕೈಗೊಳ್ಳುವ ಮೊದಲು ಮತ್ತು ನಂತರ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯವರ ಪತ್ರ ಸಂಖ್ಯೆ: CTE-325194, PCB ID 102716, ದಿನಾಂಕ: 07.06.2021 ರಲ್ಲಿ ವಿಧಿಸಿರುವ ಎಲ್ಲಾ ಷರತ್ತುಗಳನ್ನು ತಪ್ಪದೇ ಅನುಸರಿಸತಕ್ಕದ್ದು** ಹಾಗೂ ಈ ಕಛೇರಿಯಿಂದ ಅನುಮೋದಿಸಿರುವ ಕಟ್ಟಡ ನಕ್ಷೆಗೆ ಅನುಗುಣವಾಗಿ ಸದರಿ ಕಟ್ಟಡವು ಪೂರ್ಣಗೊಂಡ ನಂತರ ಸದರಿಯವರಿಂದ ಕಟ್ಟಡ ಅಂತಿಮಗೊಂಡಿರುವ ಬಗ್ಗೆ CFO ಅನ್ನು ಪಡೆಯತಕ್ಕದ್ದು.
7. ಸದರಿ ಜಮೀನಿನಲ್ಲಿ ಯಾವುದೇ ಕಾಮಗಾರಿ ಕೈಗೊಳ್ಳುವ ಮೊದಲು ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ ರವರ ಪತ್ರ ಸಂಖ್ಯೆ: SEE/BRC/EE(O)/AEE(O)/F-1(A)/21-22/1848-49, dt:04.08.2021 ರಲ್ಲಿ ವಿಧಿಸಿರುವ ಎಲ್ಲಾ ಷರತ್ತುಗಳನ್ನು ತಪ್ಪದೇ ಅನುಸರಿಸತಕದ್ದು.
8. ಸದರಿ ಜಮೀನಿನಲ್ಲಿ ಯಾವುದೇ ಕಾಮಗಾರಿ ಕೈಗೊಳ್ಳುವ ಮೊದಲು ಭಾರತ್ ಸಂಚಾರ್ ನಿಗಮ ಲಿಮಿಟೆಡ್ ರವರ ಪತ್ರ ಸಂಖ್ಯೆ: DE/SAN/BG/NOC/HRB (S-11)/2020-21/53, dt: 16.11.2020 ರಲ್ಲಿ ವಿಧಿಸಿರುವ ಎಲ್ಲಾ ಷರತ್ತುಗಳನ್ನು ತಪ್ಪದೇ ಅನುಸರಿಸತಕದ್ದು.

ದೂರವಾಣಿ / ಫ್ಯಾಕ್ಸ್ : 080-2793 4470
080-2793 5412

URL : www.hoskote.tpa.gov.in
e-mail : hosakote.pa@gmail.com

# ಹೊಸಕೋಟೆ ಯೋಜನಾ ಪ್ರಾಧಿಕಾರ

ಮಿಷನ್ ಹಾಸ್ಪಿಟಲ್ ರಸ್ತೆ, 1ನೇ ಅಡ್ಡರಸ್ತೆ, ಶ್ರೀ ವೆಂಕಟಾದ್ರಿ ಬಡಾವಣೆ, ಹೊಸಕೋಟೆ - 562 114, ಬೆಂಗಳೂರು (ಗ್ರಾ) ಜಿಲ್ಲೆ.

ಸಂಖ್ಯೆ: ಹೊಯೋಪ್ರಾ/ಸಿ.ಸಿ./24/2021–22 ದಿನಾಂಕ: 09.09.2021

9. ಸದರಿ ಜಮೀನಿನಲ್ಲಿ ಯಾವುದೇ ಕಾಮಗಾರಿ ಕೈಗೊಳ್ಳುವ ಮೊದಲು ಭಾರತೀಯ ವಿಮಾನಯಾನ ಪ್ರಾಧಿಕಾರ ರವರ ಪತ್ರ ಸಂಖ್ಯೆ: BIAL/SOUTH/B/030921/533142, dt: 19.03.2021 ರಲ್ಲಿ ವಿಧಿಸಿರುವ ಎಲ್ಲಾ ಷರತ್ತುಗಳನ್ನು ತಪ್ಪದೇ ಅನುಸರಿಸತಕದ್ದು.
10. ಕರ್ನಾಟಕ ರಾಜ್ಯ ಅಗ್ನಿ ಶಾಮಕ ಮತ್ತು ತುರ್ತು ಸೇವೆಗಳು, ಬೆಂಗಳೂರು –42 ಇವರ ನಿರಾಕ್ಷೇಪಣಾ ಪತ್ರ ಸಂಖ್ಯೆ: KSFES/GBC(1)/113, dt: 09.06.2021 ರಲ್ಲಿ ವಿಧಿಸಿರುವ ಎಲ್ಲಾ ಷರತ್ತುಗಳನ್ನು ತಪ್ಪದೇ ಅನುಸರಿಸತಕ್ಕದ್ದು ಹಾಗೂ ಈ ಕಛೇರಿಯಿಂದ ಅನುಮೋದಿಸಿರುವ ಕಟ್ಟಡ ನಕ್ಷೆಗೆ ಅನುಗುಣವಾಗಿ ಸದರಿ ಕಟ್ಟಡವು ಪೂರ್ಣಗೊಂಡ ನಂತರ ಸದರಿಯವರಿಂದ ಕಟ್ಟಡ ಅಂತಿಮಗೊಂಡಿರುವ ಬಗ್ಗೆ ಅಂತಿಮ ನಿರಾಕ್ಷೇಪಣಾ ಪತ್ರ ಪಡೆಯತಕ್ಕದ್ದು.
11. ಸದರಿ ಯೋಜನೆಗೆ ಕುಡಿಯುವ ನೀರು ಪೂರೈಕೆ ಬಗ್ಗೆ ಮಂಡೂರು ಗ್ರಾಮಪಂಚಾಯಿತಿ ಪತ್ರ ಸಂ: ಮ.ಗ್ರಾ.ಪಂ, 87/2021–22, ದಿನಾಂಕ: 14.07.2021 ರಂದು ನೀಡಿರುವ ಪತ್ರದಂತೆ ಅಗತ್ಯ ಕ್ರಮ ಜರುಗಿಸಿ ನೀರು ಪೂರೈಕೆ ಮಾಡುವ ಬಗ್ಗೆ ಕ್ರಮ ಕೈಗೊಳ್ಳುವುದು ಹಾಗೂ ಇತರೆ ಮೂಲಗಳಿಂದಲೂ ನೀರು ಪೂರೈಕೆಗೆ ಕ್ರಮ ಜರುಗಿಸುವುದು. **ಸದರಿ ಸ್ಥಳೀಯ ಸಂಸ್ಥೆಯಿಂದ ಪ್ರಸ್ತಾಪಿತ ವಸತಿ ಕಟ್ಟಡಕ್ಕೆ ನೀರನ್ನು ಒದಗಿಸದೇ ಇದ್ದಲ್ಲಿ, ಈ ಬಗ್ಗೆ ಅಭಿವೃದ್ಧಿದಾರರು / ಜಮೀನಿನ ಮಾಲೀಕರು ತಮ್ಮ ಸ್ವಂತ ಖರ್ಚಿನಲ್ಲಿ ಕುಡಿಯುವ ನೀರು ಪೂರೈಕೆಗೆ ಅಗತ್ಯ ಕ್ರಮವನ್ನು ಕೈಗೊಳ್ಳುವ ನಿಬಂಧನೆಗೆ ಒಳಪಟ್ಟಿರುತ್ತದೆ.**
12. ಇತರೇ ಇಲಾಖೆಗಳಿಂದ ಪಡೆದಿರುವ ನಿರಾಕ್ಷೇಪಣಾ ಪತ್ರಗಳಲ್ಲಿನ ನಿಬಂಧನೆ/ಷರತ್ತು ಹಾಗೂ ಇತರೇ ಅಂಶಗಳನ್ನು ತಪ್ಪದೇ ಪಾಲಿಸತಕ್ಕದ್ದು ಮತ್ತು ಸಲ್ಲಿಸಲಾದ ನಿರಾಕ್ಷೇಪಣಾ ಪತ್ರಗಳ ಅವಧಿ ಪೂರ್ಣಗೊಂಡಿದ್ದಲ್ಲಿ ನವೀಕರಿಸಿಕೊಳ್ಳತಕ್ಕದ್ದು ಹಾಗೂ ಜಮೀನು / ಕಟ್ಟಡಗಳ ವಿಸ್ತೀರ್ಣಗಳು ವ್ಯತ್ಯಾಸವಿದ್ದಲ್ಲಿ ಅವುಗಳ ಪರಿಷ್ಕೃತ ಆದೇಶವನ್ನು ಪಡೆದು ಈ ಕಛೇರಿಗೆ ಮಾಹಿತಿಗಾಗಿ ಸಲ್ಲಿಸತಕ್ಕದ್ದು.
13. ಈ ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ ಕಟ್ಟಡ ನಕ್ಷೆಯಲ್ಲಿ ಯಾವುದೇ ಬದಲಾವಣೆಯನ್ನು ಮಾಡಬಾರದು.
14. ಈ ನಿವೇಶನದಲ್ಲಿ ಹಾಲಿ ಇರುವ ಗಿಡಮರಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಉಳಿಸಿಕೊಳ್ಳತಕ್ಕದ್ದು ಹಾಗೂ ಹೊಸ ಸಸ್ಯಗಳನ್ನು ಬೆಳೆಸುವುದು.
15. ಸೋಲಾರ್ ವಾಟರ್ ಹೀಟರ್ ಅನ್ನು ಕಟ್ಟಡಗಳಲ್ಲಿ ಕಡ್ಡಾಯವಾಗಿ ಅಳವಡಿಸತಕ್ಕದ್ದು.
16. ಸದರಿ ನಿವೇಶನದಲ್ಲಿ ಮಳೆ ನೀರು ಕೊಯ್ಲು ಪದ್ಧತಿ (ಸಂಗ್ರಹಣೆ) ಯನ್ನು ಕಡ್ಡಾಯವಾಗಿ ಅಳವಡಿಸುವುದು ಮತ್ತು ಅಂತರ್ ಜಲವೃದ್ಧಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.
17. ಕಟ್ಟಡದ ನಿರ್ಮಾಣ ಕಾರ್ಯಕ್ಕೆ ಬಾಲ ಕಾರ್ಮಿಕರನ್ನು ಬಳಸುವುದನ್ನು ನಿಷೇಧಿಸಲಾಗಿದೆ ಹಾಗೂ ಕಾರ್ಮಿಕ ಇಲಾಖೆಯ ಆದೇಶಾನುಸಾರ ವಿಧಿಸಿರುವ ಎಲ್ಲಾ ಷರತ್ತುಗಳಿಗೆ ಬದ್ಧರಾಗಿರತಕ್ಕದ್ದು. ಮತ್ತು ಕಟ್ಟಡ ಕಾಮಗಾರಿ ಕಾರ್ಮಿಕರಿಗೆ ಕಟ್ಟಡ ಕಾಮಗಾರಿಯ ಸಂದರ್ಭದಲ್ಲಿ ಅಗತ್ಯ ಸೌಕರ್ಯಗಳನ್ನು ಒದಗಿಸತಕ್ಕದ್ದು.
18. ಕಟ್ಟಡ ನಿರ್ಮಾಣ ಸಾಮಗ್ರಿಗಳನ್ನು ರಸ್ತೆ, ಪಾದಚಾರಿ ಮಾರ್ಗಗಳಲ್ಲಿ ಶೇಖರಣೆ ಮಾಡಬಾರದು.
19. ಕಟ್ಟಡ ನಡು ಜಾಗ ಪ್ರದೇಶದ ಅಂಚಿನಲ್ಲಿ ಗಿಡ ಮರಗಳನ್ನು ಬೆಳಸತಕ್ಕದ್ದು.
20. ಒಂದು ಅನುಮೋದಿತ ಕಟ್ಟಡ ನಕ್ಷೆಯನ್ನು ಕಟ್ಟಡ ನಿರ್ಮಾಣ ಸ್ಥಳದಲ್ಲಿ ಅಧಿಕಾರಿಗಳ ಸಮೀಕ್ಷೆಗಾಗಿ ಪ್ರದರ್ಶಿಸತಕ್ಕದ್ದು.
21. ಸದರಿ ಪ್ರಸ್ತಾಪಿತ ಜಮೀನಿನಲ್ಲಿ ಹೊಸಕೋಟೆ ಯೋಜನಾ ಪ್ರಾಧಿಕಾರ/ಇತರೆ ಸರ್ಕಾರಿ ಇಲಾಖೆಗಳ ಜಮೀನುಗಳು/ಅನ್ಯ ಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಹಾಗೂ ಖರಾಬು ಜಮೀನುಗಳ ಅಳತೆಗಳು ಮತ್ತು ಅವುಗಳ ವಾಸ್ತವಿಕ ಸ್ಥಳಗಳ ವ್ಯತ್ಯಾಸ ಕಂಡುಬಂದಂತಹ ಸಂದರ್ಭದಲ್ಲಿ ಹೊಸಕೋಟೆ ಯೋಜನಾ ಪ್ರಾಧಿಕಾರವು ಅನುಮೋದಿತ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯನ್ನು/ಕಟ್ಟಡ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಸಂಪೂರ್ಣ ಅಧಿಕಾರ ಹೊಂದಿರುತ್ತದೆ.

22. ಈ ಅನುಮೋದನೆಯು ತಾಂತ್ರಿಕವಾಗಿರುವುದರಿಂದ ಇದನ್ನು ಜಮೀನಿನ ಮೇಲಿರುವ ಹಕ್ಕನ್ನು ಅಥವಾ ಮಾಲೀಕತ್ವವನ್ನು ನಿರೂಪಿಸಲು ಉಪಯೋಗಿಸಲು ಬರುವುದಿಲ್ಲ.
23. ಸದರಿ ಜಮೀನಿಗೆ ಸಂಬಂಧಿಸಿದಂತೆ ಯಾವುದೇ ಸಿವಿಲ್ ವ್ಯಾಜ್ಯಗಳಿಗೆ ಪ್ರಾಧಿಕಾರವು ಜವಾಬ್ದಾರಿಯಾಗಿರುವುದಿಲ್ಲ.
24. ಸದರಿ ಕಟ್ಟಡದಲ್ಲಿ ವಿಕಲಚೇತನ ಸ್ನೇಹಿ ಸೌಲಭ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳುವುದು.
25. ನೈಸರ್ಗಿಕವಾಗಿ ಹರಿಯುವ ನದಿ/ ಹಳ್ಳ /ಕೆರೆ ಮುಂತಾದವುಗಳಿಗೆ ಯಾವುದೇ ಮಲಿನ ನೀರನ್ನು ಬಿಡಬಾರದು.
26. ಶೌಚಕ್ಕೆ ಬಳಸುವ ತ್ಯಾಜ್ಯ ನೀರನ್ನು ''ನಗರ ಮರುಬಳಕೆ ಮಾನದಂಡ'' ದಂತೆ ಬಳಸುವುದು.
27. ಸಂಸ್ಕರಿತ ತ್ಯಾಜ್ಯ ನೀರನ್ನು ನಿವೇಶನದಲ್ಲಿನ ಉದ್ಯಾನವನ ಮತ್ತು ಶೌಚಕ್ಕೆ ಬಳಸುವುದು.
28. ಎಸ್.ಟಿ.ಪಿ. ಯಲ್ಲಿ ವಾಸನೆ ನಿಯಂತ್ರಿಸುವ ವ್ಯವಸ್ಥೆಯನ್ನು ಅಳವಡಿಸುವುದು.
29. ಕಟ್ಟಡ ಕಾರ್ಮಿಕರು ಆದಷ್ಟು ಕಡಿಮೆ ಹೊಗೆ ಹೊರಸೂಸುವ ಉತ್ತಮ ತಾಂತ್ರಿಕತೆಯನ್ನು ಬಳಸುವುದು.
30. ಸರ್ಕಾರದ ನಿರ್ದೇಶನದ ಮೇರೆಗೆ ಇನ್ನಾವುದೇ ಶುಲ್ಕಗಳನ್ನು ತುಂಬಲು ಪ್ರಾಧಿಕಾರವು ಸೂಚನೆ ನೀಡಿದಲ್ಲಿ ಅರ್ಜಿದಾರರು ಅಂತಹ ಶುಲ್ಕವನ್ನು ಪ್ರಾಧಿಕಾರಕ್ಕೆ ಪಾವತಿಸತಕ್ಕದ್ದು.
31. ಮೇಲಿನಂತೆ ನೀಡಲಾಗಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ವಿಧಿ 15 (4) ರಂತೆ ಕ್ರಮ ಕೈಗೊಳ್ಳಲು ಪ್ರಾಧಿಕಾರಕ್ಕೆ ಅವಕಾಶ ಇರುವುದನ್ನು ನಿಮ್ಮ ಗಮನಕ್ಕೆ ತರಲಾಗಿದೆ.
32. ಪ್ರಾಧಿಕಾರವು ವಿಧಿಸುವ ಇನ್ನಾವುದೇ ಷರತ್ತುಗಳಿಗೆ ಬದ್ಧವಾಗಿರತಕ್ಕದ್ದು.
33. ಮೇಲ್ಕಂಡ ಯಾವುದೇ ಷರತ್ತುಗಳನ್ನು ಮತ್ತು ಇತರೆ ಯಾವುದೇ ಪ್ರಾಧಿಕಾರವು ವಿಧಿಸುವ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಪ್ರಾಧಿಕಾರವು ನೀಡಿರುವ ಮಂಜೂರಾತಿಯು ಕೂಡಲೇ ರದ್ದಾಗುವುದು.
34. **ಅರ್ಜಿದಾರರು ಸಲ್ಲಿಸಿರುವ ದಾಖಲಾತಿಗಳನ್ವಯ ಈ ಅನುಮತಿಯನ್ನು ನೀಡಲಾಗಿದ್ದು, ವಸತಿ ಕಟ್ಟಡ ನಕ್ಷೆಗೆ ಅಂಗೀಕಾರ ಕೋರಿಕೆ ಸಂಬಂಧ ಸಲ್ಲಿಸಲಾಗಿರುವ ದಾಖಲೆ ಅಥವಾ ಬೇರೆ ಯಾವುದೇ ಮಾಹಿತಿಗಳು ತಪ್ಪಾಗಿದ್ದಲ್ಲಿ ವಸತಿ ಕಟ್ಟಡ ನಕ್ಷೆಗೆ ನೀಡಿರುವ ಅಂಗೀಕಾರ ತಾನಾಗಿಯೇ ರದ್ದುಗೊಳ್ಳುತ್ತದೆ.**

Housiey.com

ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು,
ಹಾಗೂ ಸದಸ್ಯ ಕಾರ್ಯದರ್ಶಿ, ಹೊಸಕೋಟೆ ಯೋಜನಾ ಪ್ರಾಧಿಕಾರ,
ಹೊಸಕೋಟೆ.

<u>ಪ್ರತಿಗಳನ್ನು :</u>

1. ಕಾರ್ಯದರ್ಶಿಗಳು, ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ, ನಂ. 1/14, 2ನೇ ಮಹಡಿ, ಸಿಲ್ವರ್ ಜ್ಯುಬಿಲಿ ಬ್ಲಾಕ್, ಯೂನಿಟಿ ಬಿಲ್ಡಿಂಗ್, ಸಿ.ಎಸ್.ಐ. ಕಾಂಪೌಂಡ್, 3ನೇ ಅಡ್ಡ ರಸ್ತೆ, ಮಿಷನ್ ರಸ್ತೆ, ಬೆಂಗಳೂರು–27 ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.

2. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಮಂಡೂರು ಗ್ರಾಮಪಂಚಾಯಿತಿ, ಬಿದರಹಳ್ಳಿ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು } ಇವರಿಗೆ ಕಟ್ಟಡ ನಕ್ಷೆಯ ನಾಲ್ಕು ಪ್ರತಿಗಳೊಂದಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.

3. ಮೆ॥ ವೈಟ್ ವಿಂಡ್ಸ್ ಕನ್ಸ್‌ಟ್ರಕ್ಷನ್ಸ್ ಪ್ರೈ ಲಿ., ನಂ. 130/2ಬಿ, ಬೊಮ್ಮೇನಹಳ್ಳಿ, ಬೂದಿಗೆರೆ ಕ್ರಾಸ್, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.

4. ಕಛೇರಿ ಪ್ರತಿ.